# ಕರ್ನಾಟಕ ವಿಧಾನ ಸಭೆ

**(ಹದಿನಾರನೇ ವಿಧಾನ ಸಭೆ)**

## ಹತ್ತನೇ ಅಧಿವೇಶನ

## ಲಘು ಪ್ರಕಟಣೆ ಭಾಗ–2

**(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)**

**ಮಂಗಳವಾರ, ದಿನಾಂಕ:04ನೇ ಆಗಸ್ಟ್ 2026**

---

ಸಂಖ್ಯೆ: **197**

### ವಿಧಾನ ಸಭೆಯ ಉಪವೇಶನಗಳು

ಕರ್ನಾಟಕ ವಿಧಾನ ಸಭೆಯು ಗುರುವಾರ ದಿನಾಂಕ 13ನೇ ಆಗಸ್ಟ್ 2026ರಂದು ಬೆಳಿಗ್ಗೆ 11.00 ಗಂಟೆಗೆ ಬೆಂಗಳೂರಿನ ವಿಧಾನಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ ಸಭೆ ಸೇರಲಿದೆ.

16ನೇ ವಿಧಾನ ಸಭೆಯ ಹತ್ತನೇ ಅಧಿವೇಶನದ ಕಾರ್ಯಕಲಾಪಗಳನ್ನು ಈ ಕೆಳಕಂಡ ದಿನಾಂಕಗಳಂದು ನಡೆಸಲು ನಿಗದಿಪಡಿಸಲಾಗಿದೆ:–

**ದಿನಾಂಕ: 13, 14, 17, 18, 19, 20, 21, 24, 25 ಹಾಗೂ 27ನೇ ಆಗಸ್ಟ್ 2026**

### 1. ಪ್ರಶ್ನೆಗಳು
**(ನಿಯಮಗಳು 42 ಮತ್ತು 45)**

ಈ ಲಘು ಪ್ರಕಟಣೆಗೆ ಲಗತ್ತಿಸಿರುವ ಅನುಬಂಧ–1 ಮತ್ತು 2ರಲ್ಲಿ ನಮೂದಿಸಿರುವ ಷರತ್ತುಗಳಿಗೆ ಒಳಪಟ್ಟು ಸಾರ್ವಜನಿಕ ಹಿತದೃಷ್ಟಿಯ ಪ್ರಶ್ನೆಗಳು / ಸೂಚನೆಗಳನ್ನು ನೀಡಲು ಮಾನ್ಯ ಶಾಸಕರಿಗೆ ಅವಕಾಶವಿರುತ್ತದೆ.

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಾವಳಿಗಳನ್ವಯ ದಿನವೊಂದಕ್ಕೆ ಗರಿಷ್ಠ ಐದು(5) ಪ್ರಶ್ನೆಗಳನ್ನು ನೀಡಲು ಮಾನ್ಯ ಶಾಸಕರಿಗೆ ಅವಕಾಶವಿರುತ್ತದೆ. **ಪ್ರಶ್ನೆಗಳ ಸೂಚನಾ ಪತ್ರದಲ್ಲಿ ಆದ್ಯತಾ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸಬೇಕಾಗಿರುತ್ತದೆ.**

**ಪ್ರಶ್ನೆಗಳ ಸೂಚನಾ ಪತ್ರಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಹಾಗೂ ಬ್ಯಾಲೆಟ್ ನಡೆಸುವ ದಿನಾಂಕಗಳ ವಿವರಗಳು ಕೆಳಕಂಡಂತಿವೆ:**

| ಪಟ್ಟಿ ಸಂಖ್ಯೆ | ಉಪವೇಶನದ ದಿನಾಂಕ | ಸಮೂಹ | ಪ್ರಶ್ನೆಗಳ ಸೂಚನಾ ಪತ್ರಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ | ಪ್ರಶ್ನೆಗಳ ಸೂಚನಾ ಪತ್ರಗಳ ಬ್ಯಾಲೆಟ್ ನಡೆಸುವ ದಿನಾಂಕ | ಬ್ಯಾಲೆಟ್ ನಡೆಯುವ ಸ್ಥಳ ಮತ್ತು ಸಮಯ |
|---|---|---|---|---|---|
| **1.** | **17.08.2026 (ಸೋಮವಾರ)** | **ಅ–A** | **06.08.2026** | **10.08.2026** | **ಕಾರ್ಯದರ್ಶಿಯವರ ಕೊಠಡಿ, ಕೊಠಡಿ ಸಂಖ್ಯೆ: 121, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು. ಸಮಯ: ಮಧ್ಯಾಹ್ನ 3.00 ಗಂಟೆಗೆ** |
| **2.** | **18.08.2026 (ಮಂಗಳವಾರ)** | **ಆ–B** | **07.08.2026** | **11.08.2026** | |
| **3.** | **19.08.2026 (ಬುಧವಾರ)** | **ಇ–C** | **10.08.2026** | **12.08.2026** | |
| **4.** | **20.08.2026 (ಗುರುವಾರ)** | **ಈ–D** | **11.08.2026** | **13.08.2026** | |
| **5.** | **21.08.2026 (ಶುಕ್ರವಾರ)** | **ಉ–E** | **11.08.2026** | **14.08.2026** | |

| | | | | | |
|---|---|---|---|---|---|
| 6. | **24.08.2026 (ಸೋಮವಾರ)** | **ಅ–A** | **12.08.2026** | **17.08.2026** | **ಕಾರ್ಯದರ್ಶಿಯವರ ಕೊಠಡಿ, ಕೊಠಡಿ ಸಂಖ್ಯೆ: 121, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು. ಸಮಯ: ಮಧ್ಯಾಹ್ನ 3.00 ಗಂಟೆಗೆ** |
| 7. | **25.08.2026 (ಮಂಗಳವಾರ)** | **ಆ–B** | **13.08.2026** | **18.08.2026** | |
| 8. | **27.08.2026 (ಗುರುವಾರ)** | **ಈ–D** | **14.08.2026** | **19.08.2026** | |

**ಪ್ರಶ್ನೆಗಳ ಸೂಚನಾ ಪತ್ರಗಳನ್ನು ಸಮೂಹವಾರು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಮಧ್ಯಾಹ್ನ 3.00 ಗಂಟೆಯ ಒಳಗಾಗಿ ಮಾತ್ರ ನೀಡಲು ಅವಕಾಶವಿರುತ್ತದೆ.**

ನಿಯಮ 39ರ ಮೇರೆಗೆ ಪ್ರಶ್ನೆಗಳನ್ನು ನೀಡಲು ಇರುವ 15 ದಿನಗಳ ಕಾಲಾವಕಾಶವನ್ನು ಮತ್ತು ನಿಯಮ 41ರ ಮೇರೆಗೆ ಉತ್ತರಗಳನ್ನು ಒದಗಿಸಲು ಇರುವ 10 ದಿನಗಳ ಕಾಲಾವಕಾಶವನ್ನು ಪ್ರಸ್ತುತ ಅಧಿವೇಶನದ ಪ್ರಶ್ನೋತ್ತರ ದಿನಾಂಕಗಳ ಅವಧಿಗೆ ಮಾತ್ರ ಕಡಿತಗೊಳಿಸಲಾಗಿರುತ್ತದೆ.

**ಪ್ರಶ್ನೆಗಳಿಗೆ ಸಂಬಂಧಿಸಿದ ಸಮೂಹಗಳು ಪ್ರಶ್ನೆಗಳಿಗೆ ಉತ್ತರ ನೀಡುವ ದಿನಾಂಕ, ಸಂಬಂಧಿತ ಮಂತ್ರಿಗಳು ಮತ್ತು ಇಲಾಖೆಗಳ ವಿವರಗಳನ್ನು ಈ ಕೆಳಕಂಡ ಪಟ್ಟಿಯಲ್ಲಿ ನೀಡಲಾಗಿದೆ:-**

## ಸಮೂಹ ಅ-A

| ಪ್ರಶ್ನೆಗಳಿಗೆ ಉತ್ತರ ನೀಡುವ ದಿನಾಂಕ | ಸಂಬಂಧಪಟ್ಟ ಮಂತ್ರಿಗಳು | ಇಲಾಖೆಗಳು |
|---|---|---|
| **17 ಮತ್ತು 24ನೇ ಆಗಸ್ಟ್ 2026 (ಸೋಮವಾರ)** | **ಉಪ ಮುಖ್ಯಮಂತ್ರಿಗಳು** | 1. ಕಂದಾಯ ಇಲಾಖೆ<br>2. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ |
| | **ಸಾರಿಗೆ ಸಚಿವರು** | ಸಾರಿಗೆ ಇಲಾಖೆ |
| | **ಲೋಕೋಪಯೋಗಿ ಸಚಿವರು** | ಲೋಕೋಪಯೋಗಿ ಇಲಾಖೆ |
| | **ಇಂಧನ ಮತ್ತು ಪ್ರವಾಸೋದ್ಯಮ ಸಚಿವರು** | 1. ಇಂಧನ ಇಲಾಖೆ<br>2. ಪ್ರವಾಸೋದ್ಯಮ ಇಲಾಖೆ |
| | **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ |
| | **ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು** | ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಮತ್ತು ಕಾನೂನು ಮಾಪನ ಶಾಸ್ತ್ರ ಇಲಾಖೆ |

# ಸಮೂಹ ಆ–B

| ಪ್ರಶ್ನೆಗಳಿಗೆ ಉತ್ತರ ನೀಡುವ ದಿನಾಂಕ | ಸಂಬಂಧಪಟ್ಟ ಮಂತ್ರಿಗಳು | ಇಲಾಖೆಗಳು |
|---|---|---|
| **18 ಮತ್ತು 25ನೇ ಆಗಸ್ಟ್ 2026** (ಮಂಗಳವಾರ) | **ಮುಖ್ಯಮಂತ್ರಿಗಳು** | 1. ಆರ್ಥಿಕ ಇಲಾಖೆ<br>2. ಸಂಪುಟ ವ್ಯವಹಾರಗಳು<br>3. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ–ಆಡಳಿತ ಹೊರತುಪಡಿಸಿ)<br>4. ಒಳಾಡಳಿತ ಇಲಾಖೆಯಿಂದ **ಗುಪ್ತಚರ**<br>5. **ಹಂಚಿಕೆಯಾಗದ ಇನ್ನಿತರೆ ಖಾತೆಗಳು** |
| | **ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರು** | ನಗರಾಭಿವೃದ್ಧಿ ಇಲಾಖೆಯಿಂದ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಒಳಗೊಂಡಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ (GBA), ಬೆಂಗಳೂರು ಉತ್ತರ ನಗರಪಾಲಿಕೆ, ಬೆಂಗಳೂರು ದಕ್ಷಿಣ ನಗರಪಾಲಿಕೆ, ಬೆಂಗಳೂರು ಪೂರ್ವ ನಗರಪಾಲಿಕೆ, ಬೆಂಗಳೂರು ಪಶ್ಚಿಮ ನಗರಪಾಲಿಕೆ, ಬೆಂಗಳೂರು ಕೇಂದ್ರ ನಗರಪಾಲಿಕೆ, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (BWSSB), ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (BMRCL) |
| | **ನಗರಾಭಿವೃದ್ಧಿ ಸಚಿವರು** | ನಗರಾಭಿವೃದ್ಧಿ ಒಳಗೊಂಡಂತೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (KUWSDB), ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ (KUIDFC), ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು ಮತ್ತು ಸ್ಥಳೀಯ ಯೋಜನಾ ಪ್ರಾಧಿಕಾರಗಳು [ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (BDA), ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ (BMRDA), ಗ್ರೇಟರ್ ಬೆಂಗಳೂರು ಪ್ರಾಧಿಕಾರ (GBA) ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ (Commisionerate of Town and Country Planning) ಹೊರತುಪಡಿಸಿ] |
| | **ಗೃಹ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇ–ಆಡಳಿತ ಸಚಿವರು** | 1. ಒಳಾಡಳಿತ ಇಲಾಖೆಯಿಂದ ಗುಪ್ತಚರ ವಿಭಾಗ ಹೊರತುಪಡಿಸಿ **ಒಳಾಡಳಿತ**<br>**2.** ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಿಂದ **ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ**<br>3. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ **ಇ–ಆಡಳಿತ** |
| | | ಆರ್ಥಿಕ ಇಲಾಖೆಯಿಂದ **ಅಬಕಾರಿ** |

# ಸಮೂಹ ಇ-C

| ಪ್ರಶ್ನೆಗಳಿಗೆ ಉತ್ತರ ನೀಡುವ ದಿನಾಂಕ | ಸಂಬಂಧಪಟ್ಟ ಮಂತ್ರಿಗಳು | ಇಲಾಖೆಗಳು |
|---|---|---|
| **19ನೇ ಆಗಸ್ಟ್ 2026**<br>**(ಬುಧವಾರ)** | **ಜಲಸಂಪನ್ಮೂಲ ಸಚಿವರು** | ಜಲಸಂಪನ್ಮೂಲ ಇಲಾಖೆಯಿಂದ **ಭಾರಿ ಮತ್ತು ಮಧ್ಯಮ ನೀರಾವರಿ** |
| | **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ |
| | **ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು** | 1. ವೈದ್ಯಕೀಯ ಶಿಕ್ಷಣ ಇಲಾಖೆ<br>**2.** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ |
| | **ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು** | 1. ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ **ಬೃಹತ್ ಮತ್ತು ಮಧ್ಯಮ ಕೈಗಾರಿಕೆ**<br>2. ಮೂಲ ಸೌಲಭ್ಯ ಅಭಿವೃದ್ಧಿ ಬಂದರು ಹಾಗೂ ಒಳನಾಡು ಜಲಸಾರಿಗೆ ಇಲಾಖೆಯಿಂದ **ಮೂಲಸೌಲಭ್ಯ ಅಭಿವೃದ್ಧಿ** |
| | | ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ **ಸಣ್ಣ ಕೈಗಾರಿಕೆಗಳು** |
| | | ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ **ಗಣಿ ಮತ್ತು ಭೂವಿಜ್ಞಾನ** |
| | | ಕಾರ್ಮಿಕ ಇಲಾಖೆ |
| | | ಜಲಸಂಪನ್ಮೂಲ ಇಲಾಖೆಯಿಂದ **ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ** |

# ಸಮೂಹ ಈ–D

| ಪ್ರಶ್ನೆಗಳಿಗೆ ಉತ್ತರ ನೀಡುವ ದಿನಾಂಕ | ಸಂಬಂಧಪಟ್ಟ ಮಂತ್ರಿಗಳು | ಇಲಾಖೆಗಳು |
|---|---|---|
| **20 ಮತ್ತು 27ನೇ ಆಗಸ್ಟ್ 2026 (ಗುರುವಾರ)** | | 1. ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ<br>2. ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ |
| | | ಸಮಾಜ ಕಲ್ಯಾಣ ಇಲಾಖೆ |
| | | ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ |
| | | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ |
| | | ಕನ್ನಡ ಮತ್ತು ಸಂಸ್ಕೃತಿ ಇಲಾಖೆ |
| | | ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ |
| | | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ |
| | | ಉನ್ನತ ಶಿಕ್ಷಣ ಇಲಾಖೆ |
| | | ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ |

## ಸಮೂಹ ಉ–E

| ಪ್ರಶ್ನೆಗಳಿಗೆ ಉತ್ತರ ನೀಡುವ ದಿನಾಂಕ | ಸಂಬಂಧಪಟ್ಟ ಮಂತ್ರಿಗಳು | ಇಲಾಖೆಗಳು |
|---|---|---|
| **21ನೇ ಆಗಸ್ಟ್ 2026** **(ಶುಕ್ರವಾರ)** | | ವಸತಿ ಇಲಾಖೆ |
| | | ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ |
| | | ಕೃಷಿ ಇಲಾಖೆ |
| | | ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ |
| | | ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶನಾಲಯ |
| | | ಸಹಕಾರ ಇಲಾಖೆ |
| | | ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ |
| | | ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಿಂದ **ಬಂದರು ಮತ್ತು ಒಳನಾಡು ಜಲಸಾರಿಗೆ** |
| | | ನಗರಾಭಿವೃದ್ಧಿ ಇಲಾಖೆಯಿಂದ **ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳು (ನಗರ ಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳು)** |

**ವಿಶೇಷ ಸೂಚನೆ: ಪ್ರಶ್ನೆಗಳ ಸಮೂಹಗಳು ಬದಲಾವಣೆಗೊಳಪಟ್ಟಿರುತ್ತದೆ. ಮಾನ್ಯ ಸಚಿವರುಗಳಿಗೆ ಖಾತೆ ಹಂಚಿಕೆಯಾದ ತರುವಾಯ ಪರಿಷ್ಕೃತ ಲಘು ಪ್ರಕಟಣೆಯನ್ನು ಹೊರಡಿಸಲಾಗುವುದು.**

## 2. ಅರ್ಧ ಗಂಟೆ ಕಾಲಾವಧಿ ಚರ್ಚೆ

## (ನಿಯಮ 59)

ಶಾಸಕರ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಿದ ಅಥವಾ ಮಂಡನೆ ಮಾಡಿದ ಉತ್ತರಗಳಿಂದ ಉದ್ಭವಿಸಿದ ವಿಷಯಗಳನ್ನು ಚರ್ಚಿಸುವ ಸಲುವಾಗಿ ಅಥವಾ ಉತ್ತರಗಳ ಸಂಬಂಧ ಮತ್ತಷ್ಟು ವಿವರಣೆಯನ್ನು ಸರ್ಕಾರದಿಂದ ಅಪೇಕ್ಷೆಪಡುವ ಸಲುವಾಗಿ, ಮಾನ್ಯ ಶಾಸಕರು ಅರ್ಧ ಗಂಟೆ ಕಾಲಾವಧಿ ಚರ್ಚೆಯ ಸೂಚನೆಗಳನ್ನು ನೀಡಲು ಅವಕಾಶವಿರುತ್ತದೆ.(ಈ ಸೂಚನೆಗಳ ಮೇಲೆ, ವಾರದಲ್ಲಿ ಎರಡು ದಿನ ಅಂದರೆ ಮಂಗಳವಾರ ಮತ್ತು ಗುರುವಾರಗಳಂದು ಚರ್ಚೆ ನಡೆಸಲು ಅನುಮತಿಸಲಾಗುವುದು) ಅರ್ಧ ಗಂಟೆ ಕಾಲಾವಧಿಯ ಸೂಚನಾ ಪತ್ರವನ್ನು ಮೂರು ದಿನ ಮುಂಚಿತವಾಗಿಯೇ ಕಾರ್ಯದರ್ಶಿಯವರಿಗೆ ನೀಡತಕ್ಕದ್ದು.

## 3. ಶೂನ್ಯ ವೇಳೆ

## (ನಿಯಮ 59ಎ, ಬಿ, ಸಿ ಮತ್ತು ಡಿ)

ಅಧಿವೇಶನದ ಅವಧಿಯಲ್ಲಿ ನಿಗದಿಪಡಿಸಿದ ಪ್ರತಿ ಉಪವೇಶನಗಳ ದಿನಗಳಲ್ಲಿ, ಉಪವೇಶನ ಮುಕ್ತಾಯಗೊಂಡ ಅವಧಿಯಿಂದ, ಮರುದಿನದ ಉಪವೇಶನ ಪ್ರಾರಂಭಗೊಳ್ಳುವ ನಡುವಿನ ಅವಧಿಯಲ್ಲಿ ಸಂಭವಿಸಿದ ಸಾರ್ವಜನಿಕ ಮಹತ್ವವುಳ್ಳ ಯಾವುದೇ ಘಟನಾವಳಿಯನ್ನು ಸರ್ಕಾರದ ಗಮನಕ್ಕೆ ತರುವ ಸಲುವಾಗಿ, ಶೂನ್ಯ ವೇಳೆಯ ಸೂಚನೆಗಳನ್ನು ನೀಡಲು ಶಾಸಕರಿಗೆ ಅವಕಾಶವಿರುತ್ತದೆ. ಒಂದು ದಿನಕ್ಕೆ ಒಂದು ಶೂನ್ಯ ವೇಳೆಯ ಸೂಚನೆಯನ್ನು ಮಾತ್ರ ನೀಡಲು ಅವಕಾಶವಿರುತ್ತದೆ.

## 4. ನಿಲುವಳಿ ಸೂಚನೆ

## (ನಿಯಮ 60)

ಭಾರತ ಸಂವಿಧಾನದ ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ನಿರ್ವಹಿಸುವಲ್ಲಿ ಸರ್ಕಾರ ವಿಫಲವಾದ ನಿರ್ದಿಷ್ಟ ವಿಷಯ, ಸಾರ್ವಜನಿಕವಾಗಿ ಅತ್ಯಂತ ಮಹತ್ವವಾದ ಮತ್ತು ಜರೂರಾದ ವಿಷಯಗಳನ್ನು ನಿಲುವಳಿ ಸೂಚನೆಯ ರೂಪದಲ್ಲಿ (ಪ್ರಶ್ನೋತ್ತರ, ಶೂನ್ಯ ವೇಳೆ ಮತ್ತು ಕಾಗದ ಪತ್ರಗಳ ಮಂಡನೆಯ ತರುವಾಯ) ಪ್ರಸ್ತಾಪ ಮಾಡಲು ಮಾನ್ಯ ಶಾಸಕರಿಗೆ ಅವಕಾಶವಿರುತ್ತದೆ.

## 5. ನಿಯಮ 69ರ ಸೂಚನೆಗಳು

ಇತ್ತೀಚೆಗೆ ಜರುಗಿದ ಸಾರ್ವಜನಿಕ ಮಹತ್ವವುಳ್ಳ ವಿಷಯಗಳನ್ನು ಸದನದಲ್ಲಿ ಪ್ರಸ್ತಾಪಿಸುವ ಸಲುವಾಗಿ ಈ ನಿಯಮದಡಿ ಮಾನ್ಯ ಶಾಸಕರು ಸೂಚನೆಗಳನ್ನು ನೀಡಬಹುದಾಗಿರುತ್ತದೆ.

## 6. ಗಮನ ಸೆಳೆಯುವ ಸೂಚನೆಗಳು
## (ನಿಯಮ 73)

ಯಾವುದೇ ಸಾರ್ವಜನಿಕ ಹಿತದೃಷ್ಟಿಯ ಮಹತ್ವದ ವಿಷಯಗಳನ್ನು ಮಾನ್ಯ ಸಚಿವರ ಗಮನಕ್ಕೆ ತರಲಿಚ್ಛಿಸುವ ಸಲುವಾಗಿ ಮಾನ್ಯ ಶಾಸಕರು ಸೂಚನೆಗಳನ್ನು ನೀಡಲು ಅವಕಾಶವಿರುತ್ತದೆ.

i. ವಿಧಾನಸಭೆ ಅಧಿವೇಶನ ಪ್ರಾರಂಭಕ್ಕೂ ಮೊದಲ ದಿನದಿಂದ ಅಧಿವೇಶನ ಮುಕ್ತಾಯವಾಗುವ ಒಂದು ದಿನ ಮುಂಚಿತವಾಗಿ ಮಾತ್ರ ಗಮನ ಸೆಳೆಯುವ ಸೂಚನೆಗಳನ್ನು ಮಾನ್ಯ ಸದಸ್ಯರು ನೀಡುವುದು.

ii. ಈ ಸೂಚನೆಯನ್ನು ಆಯಾ ದಿನದ ಕಲಾಪ ಪ್ರಾರಂಭಕ್ಕೂ ಒಂದು ಗಂಟೆ ಮುಂಚಿತವಾಗಿ ಕಾರ್ಯದರ್ಶಿಯವರಿಗೆ/ ಪ್ರಶ್ನೆಗಳ ಶಾಖೆಗೆ ನಿಗದಿತ ಸಮಯದಲ್ಲಿ ಸಲ್ಲಿಸುವುದು.

iii. ನಿಯಮಾವಳಿಗಳ ಪ್ರಕಾರ ದಿನ ಒಂದಕ್ಕೆ ಒಬ್ಬ ಸದಸ್ಯರು 2 ಸೂಚನೆಗಳನ್ನು ಮಾತ್ರ ಸಲ್ಲಿಸುವುದು. (ಅವುಗಳಿಗೆ ಆದ್ಯತೆ ನೀಡುವುದು ಕಡ್ಡಾಯ)

## 7. ಖಾಸಗಿ ಸದಸ್ಯರ ಕಾರ್ಯಕಲಾಪಗಳು

**ಖಾಸಗಿ ಸದಸ್ಯರ ವಿಧೇಯಕಗಳು:** ಖಾಸಗಿ ಸದಸ್ಯರ ವಿಧೇಯಕಗಳನ್ನು ನಿಯಮ 75(1) ಮತ್ತು (2)ರಡಿ ಮಾನ್ಯ ಸದಸ್ಯರು ಸದನದಲ್ಲಿ ಮಂಡಿಸಲು ಅವಕಾಶವಿರುತ್ತದೆ.

**ಖಾಸಗಿ ಸದಸ್ಯರ ನಿರ್ಣಯಗಳು:** ನಿಯಮ 32ರಡಿ ಸಾರ್ವಜನಿಕ ಹಿತದೃಷ್ಟಿಯ ಖಾಸಗಿ ಸದಸ್ಯರ ನಿರ್ಣಯವನ್ನು ಸದನದಲ್ಲಿ ಮಂಡಿಸಲು ಅವಕಾಶವಿರುತ್ತದೆ.

ಖಾಸಗಿ ಸದಸ್ಯರ ವಿಧೇಯಕಗಳು/ನಿರ್ಣಯಗಳಿಗೆ ಸಂಬಂಧಿಸಿದ ಸೂಚನಾ ಪತ್ರಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಹಾಗೂ ಬ್ಯಾಲೆಟ್ ನಡೆಸುವ ದಿನಾಂಕದ ವಿವರ ಕೆಳಕಂಡಂತಿದೆ:–

| **ಖಾಸಗಿ ಸದಸ್ಯರ ಕಾರ್ಯಕಲಾಪಗಳಿಗೆ ಗೊತ್ತುಪಡಿಸಿದ ದಿನಾಂಕ** | **ಖಾಸಗಿ ಸದಸ್ಯರ ವಿಧೇಯಕ ಮತ್ತು ನಿರ್ಣಯಗಳ ಸೂಚನಾ ಪತ್ರಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ** | **ಖಾಸಗಿ ಸದಸ್ಯರ ವಿಧೇಯಕ ಮತ್ತು ನಿರ್ಣಯಗಳಿಗೆ ಬ್ಯಾಲೆಟ್ ನಡೆಸುವ ದಿನಾಂಕ** | **ಬ್ಯಾಲೆಟ್ ನಡೆಯುವ ಸ್ಥಳ ಮತ್ತು ಸಮಯ** |
|---|---|---|---|
| **20.08.2026 (ಗುರುವಾರ)** | **14.08.2026 (ಶುಕ್ರವಾರ)** | **18.08.2026 (ಮಂಗಳವಾರ)** | **ಕಾರ್ಯದರ್ಶಿಯವರ ಕೊಠಡಿ ಕೊಠಡಿ ಸಂಖ್ಯೆ: 121, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು. ಸಮಯ: ಮಧ್ಯಾಹ್ನ 3.00 ಗಂಟೆಗೆ** |
| **27.08.2026 (ಗುರುವಾರ)** | **21.08.2026 (ಶುಕ್ರವಾರ)** | **25.08.2026 (ಮಂಗಳವಾರ)** | |

## 8. ಅರ್ಜಿಗಳು

## (ನಿಯಮ 136 ರಿಂದ 145)

ನಿಯಮಗಳಲ್ಲಿ ತಿಳಿಸಿರುವ ಷರತ್ತಿಗೆ ಒಳಪಟ್ಟು, ಸಾರ್ವಜನಿಕ ಹಿತದೃಷ್ಟಿಯ ನಾಗರಿಕರ ಅರ್ಜಿಗಳನ್ನು ಮೇಲು ರುಜುವಿನೊಂದಿಗೆ ಮಾನ್ಯ ಶಾಸಕರು ಸದನಕ್ಕೆ ಸಲ್ಲಿಸಲು ಅವಕಾಶವಿರುತ್ತದೆ.

## 9. ನಿಯಮ 351ರ ಮೇರೆಗೆ ಸೂಚನೆ

ಒಂದು ಕ್ರಿಯಾಲೋಪವಲ್ಲದಂತಹ ಯಾವ ವಿಷಯವನ್ನಾಗಲಿ ವಿಧಾನ ಸಭೆಯ ಗಮನಕ್ಕೆ ತರಬೇಕೆಂದು ಇಚ್ಛಿಸುವ ಸದಸ್ಯರು, ಕಾರಣಗಳನ್ನು ಸಂಕ್ಷಿಪ್ತವಾಗಿ ಲಿಖಿತ ಮೂಲಕ ಗೊತ್ತುಪಡಿಸಿದ ನಮೂನೆಯಲ್ಲಿ ಕಾರ್ಯದರ್ಶಿಯವರಿಗೆ ನೀಡಲು ಅವಕಾಶವಿರುತ್ತದೆ. ಸದರಿ ಸೂಚನೆಗಳಿಗೆ ಸರ್ಕಾರದಿಂದ ಲಿಖಿತ ಉತ್ತರವನ್ನು ಪಡೆದು ಮಾನ್ಯ ಸದಸ್ಯರಿಗೆ ಒದಗಿಸಲಾಗುವುದು.

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಾವಳಿಗಳಲ್ಲಿನ ಅವಕಾಶ ಮತ್ತು ಮಾನ್ಯ ಸಭಾಧ್ಯಕ್ಷರ ಅಪ್ಪಣೆ ಪಡೆದು, ಇನ್ನುಳಿದ ವಿಷಯಗಳನ್ನು ಚರ್ಚಿಸಲು/ಪ್ರಸ್ತಾಪಿಸಲು ಮಾನ್ಯ ಶಾಸಕರಿಗೆ ಅವಕಾಶವಿರುತ್ತದೆ.

**ಅಡಕ: ಅನುಬಂಧ–1 ಮತ್ತು 2**

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ

**ಇವರಿಗೆ:**
**ವಿಧಾನಸಭೆಯ ಎಲ್ಲಾ ಮಾನ್ಯ ಸದಸ್ಯರು.**

**ವಿಶೇಷ ಸೂಚನೆ**

**ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ, ನಿಯಮ 351ರ ಸೂಚನೆ, ಖಾಸಗಿ ವಿಧೇಯಕಗಳು/ನಿರ್ಣಯಗಳಿಗೆ ಸಂಬಂಧಿಸಿದ ಸೂಚನೆಗಳನ್ನು ಪ್ರಶ್ನೆಗಳ ಶಾಖೆಯ (ಕೊಠಡಿ ಸಂಖ್ಯೆ:143, ಮೊದಲನೇ ಮಹಡಿ, ವಿಧಾನ ಸೌಧ, ಬೆಂಗಳೂರು) ಹೊರಗೆ ಇಟ್ಟಿರುವ ಮರದ ಪೆಟ್ಟಿಗೆಯಲ್ಲಿ ಹಾಕತಕ್ಕದ್ದು.**

**ಶೂನ್ಯ ವೇಳೆ, ನಿಲುವಳಿ ಸೂಚನೆ ಹಾಗೂ ನಿಯಮ 69ರ ಸೂಚನೆಗಳನ್ನು ಶಾಸನ ರಚನಾ ಶಾಖೆಯಲ್ಲಿ (ಕೊಠಡಿ ಸಂಖ್ಯೆ:128, ಮೊದಲನೇ ಮಹಡಿ, ವಿಧಾನ ಸೌಧ, ಬೆಂಗಳೂರು) ನೀಡತಕ್ಕದ್ದು.**

**ಈ ಲಘು ಪ್ರಕಟಣೆಯು www.kla.kar.nic.in/assembly/lob/lob.htm ಅಂತರ್ಜಾಲದಲ್ಲಿ ಲಭ್ಯವಿರುತ್ತದೆ.**

# ಅನುಬಂಧ–1

ವಿಧಾನ ಸಭೆಯ ಮಾನ್ಯ ಸದಸ್ಯರು ಸೂಚನಾ ಪತ್ರಗಳನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ನೀಡುವಂತೆ ಕೋರಲಾಗಿದೆ: (ನಿಯಮ 47)

1. ಪ್ರಶ್ನೆಯು ಒಂದೇ ವಿಚಾರಕ್ಕೆ ಸಂಬಂಧಪಟ್ಟಿರತಕ್ಕದ್ದು;
2. ಅದು ಮಾಹಿತಿಯನ್ನು ಪಡೆದುಕೊಳ್ಳುವುದಕ್ಕಾಗಿ ಕೇವಲ ಒಂದು ಕೋರಿಕೆಯ ರೂಪದಲ್ಲಿರತಕ್ಕದ್ದು;
3. ಅದು ಸಂದಿಗ್ಧವಾಗಿಯಾಗಲೀ ಅಥವಾ ಅರ್ಥವಾಗದಂತೆಯಾಗಲಿ ಇರಕೂಡದು;
4. ಪ್ರಶ್ನೆಯನ್ನು ಅರ್ಥವಾಗುವಂತೆ ಮಾಡುವುದಕ್ಕೆ ಅವಶ್ಯಕವಾಗಿಲ್ಲದ ಯಾವ ಹೆಸರಾಗಲಿ ಅಥವಾ ಹೇಳಿಕೆಯಾಗಲಿ ಅದರಲ್ಲಿರತಕ್ಕದ್ದಲ್ಲ;
5. ಅದು, ಒಂದು ಹೇಳಿಕೆಯನ್ನು ಒಳಗೊಂಡಿದ್ದಲ್ಲಿ, ಆ ಹೇಳಿಕೆಯ ಸತ್ಯಾಸತ್ಯತೆಯ ಬಗ್ಗೆ ಸದಸ್ಯರು ತಾವೇ ಜವಾಬ್ದಾರರಾಗಿರತಕ್ಕದ್ದು;
6. ಅದು, ಚರ್ಚೆಗಳನ್ನು ಅನುಮಾನಿತ ನಿರ್ಧಾರಗಳನ್ನು, ಅಣಕದ ಮಾತುಗಳನ್ನು, ದೋಷಾರೋಪಣೆಗಳನ್ನು, ಶ್ಲಾಘನೆ, ವಿಶ್ಲೇಷಣೆಗಳನ್ನು ಅಥವಾ ಅಪಮಾನ ಹಾನಿಕರ ಹೇಳಿಕೆಗಳನ್ನು ಒಳಗೊಂಡಿರತಕ್ಕದಲ್ಲ;
7. ಅದರಲ್ಲಿ ಯಾವುದಾದರೂ ಒಂದು ವಿಚಾರದ ಮೇಲೆ ಅಭಿಪ್ರಾಯವನ್ನು ವ್ಯಕ್ತಪಡಿಸಬೇಕೆಂದಾಗಲಿ ಅಥವಾ ಒಂದು ಜಟಿಲವಾದ ಕಾನೂನು ಸಂಬಂಧದ ವಿಚಾರಕ್ಕೆ ಅಥವಾ ಕಾಲ್ಪನಿಕ ವಿಚಾರಕ್ಕೆ ಪರಿಹಾರ ತಿಳಿಸಬೇಕೆಂದಾಗಲಿ ಕೇಳತಕ್ಕದಲ್ಲ.
8. ಅದರಲ್ಲಿ ಯಾವನಾದರೂ ವ್ಯಕ್ತಿಯ ಸರ್ಕಾರಿ ಕೆಲಸಕ್ಕೆ ಅಥವಾ ಅವನ ಸಾರ್ವಜನಿಕ ಕಾರ್ಯಗಳಿಗೆ ಸಂಬಂಧಿಸುವಷ್ಟರ ಮಟ್ಟಿಗೆ ಹೊರತು ಅವನ ನಡತೆಯ ವಿಚಾರದಲ್ಲಾಗಲಿ ಅಥವಾ ಶೀಲ ಸ್ವಭಾವಗಳ ವಿಚಾರದಲ್ಲಾಗಲಿ ಪ್ರಶ್ನೆಯನ್ನು ಕೇಳತಕ್ಕದಲ್ಲ;
9. ಅದು, ಸಾಮಾನ್ಯವಾಗಿ ನೂರೈವತ್ತು ಪದಗಳನ್ನು ಮೀರತಕ್ಕದಲ್ಲ;
10. ಸರ್ಕಾರಕ್ಕೆ ಸಂಬಂಧಪಡದ ಯಾವುದಾದರೂ ವಿಷಯದಲ್ಲಿ ಪ್ರಶ್ನೆಯನ್ನು ಕೇಳತಕ್ಕದಲ್ಲ;
11. ಯಾವ ಸಮಿತಿಯ ವರದಿಯನ್ನು ಸದನದ ಮುಂದೆ ಮಂಡಿಸಿಲ್ಲವೋ ಅಂತಹ ಸಮಿತಿಯ ನಡವಳಿಕೆಗಳ ವಿಚಾರವಾಗಿ ಯಾವ ಪ್ರಶ್ನೆಯನ್ನೂ ಕೇಳತಕ್ಕದಲ್ಲ;
12. ಅದು, ವ್ಯಕ್ತಿ ಸಂಬಂಧವಾದ ದೂಷಣೆಯನ್ನು ಮಾಡಕೂಡದು ಅಥವಾ ಅಂತಹ ದೂಷಣೆಯು ಧ್ವನಿತಗೊಳ್ಳುವಂತಿರತಕ್ಕದಲ್ಲ;
13. ಒಂದು ಪ್ರಶ್ನೆಗೆ ಕೊಡುವ ಉತ್ತರದ ಮಿತಿಗೆ ಒಳಪಡಿಸಲಾಗದಿರುವಂತಹ ಬೃಹತ್ ಕಾರ್ಯನೀತಿಗೆ ಸಂಬಂಧಪಟ್ಟ ವಿಚಾರಣೆಗಳನ್ನು ಕುರಿತು ಪ್ರಶ್ನಿಸತಕ್ಕದಲ್ಲ;

14. ಮೊದಲೇ ಉತ್ತರ ಕೊಟ್ಟಿರುವ ಪ್ರಶ್ನೆಗಳಲ್ಲಿ ಅಥವಾ ಯಾವ ಪ್ರಶ್ನೆಗಳಿಗೆ ಉತ್ತರವನ್ನು ನಿರಾಕರಿಸಲಾಗಿದೆಯೋ ಅಂಥ ಪ್ರಶ್ನೆಗಳಲ್ಲಿ ಅಡಕವಾಗಿರುವ ಅಂಶಗಳನ್ನೇ ಕುರಿತು ಆ ಪ್ರಶ್ನೆಯನ್ನು ಪುನ: ಕೇಳತಕ್ಕದಲ್ಲ;
15. ಅದರಲ್ಲಿ ಕ್ಷುಲ್ಲಕ ವಿಷಯಗಳ ಬಗ್ಗೆ ವಿವರಗಳನ್ನು ಕೇಳತಕ್ಕದಲ್ಲ;
16. ಅದರಲ್ಲಿ, ಸಾಮಾನ್ಯವಾಗಿ ಕಳೆದು ಹೋದ ವಿಚಾರವನ್ನು ಕುರಿತು ಯಾವ ವಿವರಣೆಗಳನ್ನು ಕೇಳತಕ್ಕದಲ್ಲ;
17. ಅದರಲ್ಲಿ, ಸುಲಭವಾಗಿ ದೊರೆಯುವ ಕಾಗದ ಪತ್ರಗಳಲ್ಲಿ ಅಥವಾ ಸಾಮಾನ್ಯ ಉಲ್ಲೇಖ ಗ್ರಂಥಗಳಲ್ಲಿ ನಮೂದಿಸಿರುವ ವಿವರಗಳನ್ನು ಕೇಳತಕ್ಕದಲ್ಲ;
18. ಅದರಲ್ಲಿ ರಾಜ್ಯ ಸರ್ಕಾರಕ್ಕೆ ಮುಖ್ಯವಾಗಿ ಜವಾಬ್ದಾರಿಯಾಗಿಲ್ಲದ ಸಂಸ್ಥೆಗಳ ಅಥವಾ ವ್ಯಕ್ತಿಗಳ ನಿಯಂತ್ರಣಕ್ಕೊಳಪಟ್ಟಿರುವ ವಿಷಯಗಳನ್ನು ಕುರಿತು ಪ್ರಶ್ನಿಸತಕ್ಕದಲ್ಲ;
19. ಅದರಲ್ಲಿ ಭಾರತದ ಯಾವುದಾದರೂ ಭಾಗದಲ್ಲಿ ಅಧಿಕಾರ ವ್ಯಾಪ್ತಿಯುಳ್ಳ ಒಂದು ನ್ಯಾಯಾಲಯದವರು ವಿಚಾರಣೆ ನಡೆಸುತ್ತಿರುವ ವಿಷಯದ ಮೇಲೆ ಮಾಹಿತಿ ಪಡೆದುಕೊಳ್ಳುವುದಕ್ಕಾಗಿ ಪ್ರಶ್ನಿಸತಕ್ಕದಲ್ಲ;
20. ಅದರಲ್ಲಿ ಮಂತ್ರಿ ಮಂಡಲದಲ್ಲಿ ನಡೆಯುವ ಚರ್ಚೆಗಳು ಅಥವಾ ಯಾವ ವಿಷಯದ ಸಂಬಂಧದಲ್ಲಿ ಮಾಹಿತಿಯನ್ನು ಬಹಿರಂಗಗೊಳಿಸಕೂಡದೆಂಬುದಾಗಿ ಸಂವಿಧಾನಾತ್ಮಕ, ಶಾಸನಾತ್ಮಕ ಅಥವಾ ಸಾಂಪ್ರದಾಯಕವಾದ ಹೊಣೆಗಾರಿಕೆ ಇರುವುದೋ ಅಂಥ ವಿಷಯದ ಸಂಬಂಧದಲ್ಲಿ ರಾಜ್ಯಪಾಲರಿಗೆ ನೀಡಿರುವ ಸಲಹೆಗಳ ಬಗ್ಗೆ ಮಾಹಿತಿಯನ್ನು ಕೇಳತಕ್ಕದಲ್ಲ.
21. ಅದರಲ್ಲಿ ನ್ಯಾಯಿಕ ಅಥವಾ ಅರೆನ್ಯಾಯಿಕ ಕರ್ತವ್ಯಗಳನ್ನು ನಿರ್ವಹಿಸುತ್ತಿರುವ ಯಾವುದೇ ಶಾಸನಬದ್ಧ ನ್ಯಾಯಾಧೀಕರಣ ಅಥವಾ ಶಾಸನಬದ್ಧ ಅಧಿಕಾರ ವರ್ಗದವರ ಮುಂದೆ ಅಥವಾ ಯಾವುದೇ ವಿಷಯದ ವಿಚಾರಣೆ ಅಥವಾ ತನಿಖೆ ನಡೆಸಲು ನೇಮಕಗೊಂಡ ಯಾವುದೇ ಆಯೋಗ ಅಥವಾ ವಿಚಾರಣಾ ನ್ಯಾಯಾಲಯದ ಮುಂದೆ ಇತ್ಯರ್ಥವಾಗದೇ ಉಳಿದಿರುವ ವಿಷಯಗಳ ಬಗ್ಗೆ ಸಾಮಾನ್ಯವಾಗಿ ಪ್ರಶ್ನಿಸತಕ್ಕದಲ್ಲ. ಆದರೆ, ನ್ಯಾಯಾಧೀಕರಣ ಅಥವಾ ಸಮಿತಿ ಅಥವಾ ವಿಚಾರಣಾ ನ್ಯಾಯಾಲಯವು ಆ ವಿಷಯವನ್ನು ಪರಿಶೀಲಿಸುವುದಕ್ಕೆ ಬಾಧಕವುಂಟಾಗುವ ಸಂಭವವಿಲ್ಲದಿರುವ ಪಕ್ಷದಲ್ಲಿ, ಕಾರ್ಯವಿಧಾನ ಅಥವಾ ವಿಚಾರಣೆ ಹಂತಕ್ಕೆ ಸಂಬಂಧಿಸಿದ ವಿಷಯಗಳನ್ನು ಉಲ್ಲೇಖಿಸಬಹುದು;
22. ಅದರಲ್ಲಿ, ಅತೀ ಜರೂರು ಪ್ರಾಮುಖ್ಯತೆಯುಳ್ಳ ವಿಷಯದ ಸಂಬಂಧದಲ್ಲಿ ಸರ್ಕಾರದ ಉದ್ದೇಶಗಳ ಬಗ್ಗೆ ಸ್ಪಷ್ಟೀಕರಣವನ್ನು ಕೇಳಬಹುದು. ಆದರೆ, ಒಟ್ಟಿನಲ್ಲಿ ಪ್ರಶ್ನೆಯನ್ನು ಕೇಳುವ ಸದಸ್ಯರು ತಮ್ಮ ಪ್ರಶ್ನೆಯಲ್ಲಿ ಕೇಳಿದ ವಿಷಯ, ಕೈಗೊಂಡ ಯಾವುದೇ ನಿರ್ದಿಷ್ಟ ಕ್ರಮದ ಬಗ್ಗೆ ಅದು ಸಲಹೆ ಆಗಿರಬಾರದು;

## ಅನುಬಂಧ–2

ಈ ಕೆಳಗೆ ನಮೂದಿಸಲಾಗಿರುವ ಸೂಚನೆಗಳನ್ನು ಪಾಲಿಸದೆ ಅಪೂರ್ಣಗೊಳಿಸಿರುವ ಪ್ರಶ್ನೆಗಳು/ಗಮನ ಸೆಳೆಯುವ ಹಾಗೂ ನಿಯಮ 351ರ ಸೂಚನೆಗಳನ್ನು ಪರಿಗಣಿಸಲಾಗುವುದಿಲ್ಲ;

1) ಸೂಚನೆಯಲ್ಲಿ ಸಹಿ ಮಾಡದಿರುವುದು.

2) ಸೂಚನಾ ಪತ್ರದಲ್ಲಿ ದಿನಾಂಕ ನಮೂದಿಸದಿರುವುದು.

3) ಉತ್ತರ ನೀಡಬೇಕಾದ ದಿನಾಂಕ ತಿಳಿಸದಿರುವುದು.

4) ಪ್ರಶ್ನೆಗೆ ಆದ್ಯತಾ ಸಂಖ್ಯೆಯನ್ನು ನೀಡದಿರುವುದು.

5) ಸಮೂಹ ಗುರುತುಪಡಿಸದಿರುವುದು.

6) ಪ್ರಶ್ನೆ/ಸೂಚನೆಗೆ ಉತ್ತರ ನೀಡಲಿರುವ ಸಚಿವರ ಖಾತೆ ನಮೂದಿಸದಿರುವುದು.

7) ಪ್ರಶ್ನೆಯನ್ನು ಓದಲು, ಸ್ಪಷ್ಟವಾಗಿ ಅರ್ಥವಾಗುವಂತೆ ಬರೆಯದಿರುವುದು.

8) ಪ್ರಶ್ನೆಯು ಒಂದೇ ಇಲಾಖೆಗೆ ಸಂಬಂಧಿಸಿದ್ದರೂ ಎರಡು ಅಥವಾ ಹೆಚ್ಚು ವಿಷಯಗಳಿಗೆ ಸಂಬಂಧಿಸಿರುವುದು.

9) ಒಂದೇ ಸೂಚನೆಯಲ್ಲಿ ಎರಡು ಇಲಾಖೆಗಳಿಗೆ ಸಂಬಂಧಿಸಿದ ಪ್ರಶ್ನೆ ನೀಡಿರುವುದು.

10) ಮೂರು ವರ್ಷಗಳ ಮೇಲ್ಪಟ್ಟು ಮಾಹಿತಿ ಕೇಳಲಾಗಿರುವುದು.

11) ಸೂಚನೆ ನೀಡಲು ಸಮಯಾವಕಾಶ ಮುಕ್ತಾಯವಾಗಿರುವುದು.

12) ಹೆಚ್ಚುವರಿ ಸೂಚನೆಗಳನ್ನು ನೀಡಿದ ಕಾರಣ ಹಿಂತಿರುಗಿಸಿರುವುದು.

13) ವಿಷಯವು ಸ್ಪಷ್ಟವಾಗಿಲ್ಲದಿರುವುದು.

14) ಮತಕ್ಷೇತ್ರ ನಮೂದಿಸದಿರುವುದು.

* * * * * *